ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 12–10–2017

ಸಂಖ್ಯೆ 183/303

## ಪತ್ರಿಕಾ ಪ್ರಕಟಣೆ

# ಬೆಳೆಹಾನಿಗೆ ಪರಿಹಾರ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮತ್ತೊಮ್ಮೆ ಮನವಿ ಸಚಿವ – ಟಿ.ಬಿ. ಜಯಚಂದ್ರ

ಬೆಂಗಳೂರು, ಅಕ್ಟೋಬರ್ 12 ( ಕರ್ನಾಟಕ ವಾರ್ತೆ) :

ರಾಜ್ಯದಲ್ಲಿ ಸೆಪ್ಟೆಂಬರ್ ಮತ್ತು ಅಕ್ಟೋಬರ್ ತಿಂಗಳಲ್ಲಿ ಬಿದ್ದ ಮಳೆಯಿಂದಾಗಿ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಸಮಸ್ಯೆ ಮುಂದಿನ ದಿನಗಳಲ್ಲಿ ಉಂಟಾಗುವುದಿಲ್ಲ ಎಂದು ಕಾನೂನು ಸಚಿವ ಟಿ.ಬಿ. ಜಯಚಂದ್ರ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ತಮ್ಮ ಕಚೇರಿಯಲ್ಲಿ ಭೇಟಿಮಾಡಿದ ಸುದ್ದಿಗಾರಾರರೊಂದಿಗೆ ಮಾತನಾಡಿದ ಸಚಿವರು ರಾಜ್ಯದಲ್ಲಿ ಆಗಸ್ಟ್ ಅಂತ್ಯದವರೆಗೆ 61 ತಾಲ್ಲೂಕುಗಳಲ್ಲಿ ಬರದ ಛಾಯೆ ಮೂಡಿತ್ತು. ನಂತರ ಬಿದ್ದ ಮಳೆಯಿಂದಾಗಿ ರಾಜ್ಯಾದ್ಯಂತ ಬೆಳೆದು ನಿಂತ ಪೈರಿಗೆ ಹುಳಗಳ ಹಾವಳಿಯಿಂದಾಗಿ ಭಾರಿ ಪ್ರಮಾಣದ ಬೆಳೆ ನಷ್ಟ ಉಂಟಾಗಿದೆ. ನಷ್ಟದ ಅಂದಾಜು ಮಾಡಲು ಕಂದಾಯ ಮತ್ತು ಕೃಷಿ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಕೇಂದ್ರ ಸರ್ಕಾರ ಕಳೆದ ವರ್ಷ ಘೋಷಿಸಿರುವ ರಾಷ್ಟ್ರೀಯ ವಿಪ್ಪತ್ತು ಮಾರ್ಗಸೂಚಿ ಬದಲಾವಣೆಯಿಂದ ಮುಂಗಾರು ಹಂಗಾಮಿನಲ್ಲಿ ರಾಜ್ಯದ ಯಾವುದೇ ತಾಲ್ಲೂಕುಗಳು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲು ಬರುವುದಿಲ್ಲ. ಆದರೆ ಬೆಳೆಹಾನಿ ಪ್ರಮಾಣ ಹೆಚ್ಚಾಗಿದ್ದು ಆಗಿರುವ ನಷ್ಟದ ಪ್ರಮಾಣದ ಬಗ್ಗೆ ಎಲ್ಲಾ ಜಿಲ್ಲೆಗಳಿಂದ ದಾಖಲುಗಳನ್ನು ತರಿಸಿ ಕೇಂದ್ರಕ್ಕೆ ಪರಿಹಾರ ನೀಡುವಂತೆ ಮನವಿ ಮಾಡಲಾಗುವುದು ಎಂದು ಅವರು ತಿಳಿಸಿದರು.

ಮುಂಗಾರು ಹಂಗಾಮಿನಲ್ಲಿ ಶೇ 70 ರಷ್ಟು ಬಿತ್ತನೆಯಾಗಿದ್ದರೂ ರೈತರಿಗೆ ಯಾವುದೇ ಪ್ರಯೋಜನವಾಗುವ ಬೆಳೆ ಬರುವುದಿಲ್ಲ. ಕಾರಣ ಕೀಟ ಭಾದೆಯಿಂದ ಪೈರು ಸಂಪೂರ್ಣ ಹಾಳಾಗಿದೆ. ಅಲ್ಪಸ್ವಲ್ಪ ಪೈರು ರಕ್ಷಣೆಗೆ ರೈತ ಸಮುದಾಯಕ್ಕೆ ಶೇ 50 ರಷ್ಟು ರಿಯಾಯಿತಿ ದರದಲ್ಲಿ ಕೀಟ ನಾಶಕಗಳನ್ನು ಸರಬರಾಜು ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

ತೆಂಗು ಮತ್ತು ಅಡಿಕೆ ಬೆಳೆ ಹಾನಿಯಾಗಿರುವ ಬಗ್ಗೆ ಸಲ್ಲಿಸಿರುವ ಪ್ರಸ್ತಾವನೆಗೆ ಕೇಂದ್ರ ತೆಂಗು ಮಂಡಳಿ 36 ಕೋಟಿ ರೂ. ಪ್ಯಾಕೇಜ್ ಅನ್ವಯ ಕಳೆದ ಎರಡು ವರ್ಷಗಳಿಂದ ತೆಂಗು ಬೆಳೆಯ ಪುನಶ್ಚೇತನ ಮಾಸಲು ಮಂಜೂರು ಮಾಡಿರುವ ಪತ್ರವನ್ನು ರಾಜ್ಯಕ್ಕೆ ಕಳುಹಿಸಿಕೊಟ್ಟಿದೆ. ಆರೆ ಕೋಟ್ಯಾಂತರ ರೂ. ಮೊತ್ತದ ತೆಂಗು ಮತ್ತು ಅಡಿಕೆ ಬೆಳೆ ಹಾನಿಯಾಗಿದ್ದರೂ ರೈ ಸಮುದಾಯಕ್ಕೆ ಪರಿಹಾರವನ್ನು ಪ್ರಕಟಿಸಿಲ್ಲ ಎಂದು ಸಚಿವರು ಅಸಮಾದಾನ ವ್ಯಕ್ತಪಡಿಸಿದರು. ಈ ಬಗ್ಗೆಯು ಇನ್ನೊಮ್ಮೆ ಕೇಂದ್ರ ಸರ್ಕಾರದ ಗಮನಕ್ಕೆ ತರಲಾಗುವುದು ಎಂದರು.

ಬೆಂಗಳೂರು ಮೈಸೂರು ಕಾರಿಡಾರ್ ಯೋಜನೆ (ನೈಸ್) ರಸ್ತೆ ವಿಷಯ ಸಂಬಂಧಿಸಿದಂತೆ ಸದನ ಸಮಿತಿ ನೀಡಿರುವ ವರದಿಯ ಮೇಲೆ ಕ್ರಮ ಜರುಗಿಸುವ ವಿಚಾರದಲ್ಲಿ ನೈಸ್ ಸಂಸ್ಥೆ ನ್ಯಾಯಾಲಯದಿಂದ ತಡೆಯಾಜ್ಞೆ ತಂದಿದೆ. ತಡೆಯಾಜ್ಞೆ ತೆರವುಗೊಳಿಸಲು ಶೀಘ್ರದಲ್ಲಿ ಅಡ್ವೋಕೇಟ್ ಜನರಲ್ ಅವರೊಂದಿಗೆ ಸಮಾಲೋಚಿಸಿ ಸರ್ಕಾರ ಸೂಕ್ತ ಮಾರ್ಗದರ್ಶನ ನೀಡಿ ನ್ಯಾಯಾಲಯದಲ್ಲಿರುವ ತಡೆಯಾಜ್ಞೆಯನ್ನು ತೆರವುಗೊಳಿಸಲು ಪ್ರಯತ್ನ ಮಾಡಲಾಗುವುದು ಎಂದು ಅವರು ತಿಳಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 184/304

## ಅಕ್ಟೋಬರ್ 14 ಮತ್ತು 15 ರಂದು
## ಎರಡು ದಿನಗಳ "ಸಾವಯವ ಮತ್ತು ಸಿರಿಧಾನ್ಯ ಮೇಳ"

**ಬೆಂಗಳೂರು, ಅಕ್ಟೋಬರ್ 12 ( ಕರ್ನಾಟಕ ವಾರ್ತೆ) :**

ಕೃಷಿ ಇಲಾಖೆ ಮತ್ತು ಜೈವಿಕ್ ಕೃಷಿಕ್ ಸೊಸೈಡಿ (ರಿ) ಇವರ ಸಹಯೋಗದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಆಟದ ಮೈದಾನ, ನಾಗವಾರ ಮೇಲು ಸೇತುವೆ ಹತ್ತಿರ, ನಾಗವಾರ ಬೆಂಗಳೂರು ಇಲ್ಲಿ ಎರಡು ದಿನಗಳ "ಸಾವಯವ ಮತ್ತು ಸಿರಿಧಾನ್ಯ ಮೇಳ" ವನ್ನು ಆಯೋಜಿಸಿದೆ.

ಈ ಮೇಳದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಪ್ರಾಂತೀಯ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳು, ಸಾವಯವ ಮತ್ತು ಸಿರಿಧಾನ್ಯಗಳ ಸಗಟು ಮತ್ತು ಚಿಲ್ಲರೆ ಮಾರಾಟಗಾರರು ಭಾಗವಹಿಸಿ ಸಾವಯವ ಪದ್ಧತಿಯಲ್ಲಿ ಬೆಳೆದಿರುವ ತಾಜಾ ತರಕಾರಿಗಳು, ಸೊಪ್ಪು, ಹಣ್ಣುಗಳು ಹಾಗೂ ಪೌಷ್ಠಿಕಾಂಶಗಳಲ್ಲಿ ಹಿರಿದಾದ, ಸಿರಿಧಾನ್ಯಗಳಾದ ರಾಗಿ, ನವಣೆ, ಬರಗು, ಹಾರಕ, ಸಾಮೆ, ಊದಲು ಮತ್ತು ಕೊರಲೆ ಕೆಂಪಕ್ಕಿ, ವಿವಿಧ ಔಷಧೀಯ ಗುಣಗಳುಳ್ಳ ಕರಿಭತ್ತ, ನವರ ಅಕ್ಕಿ, ಸಾವಯವ ಬೆಲ್ಲ, ಪುಡಿ ಬೆಲ್ಲ, ಸಾಂಬಾರ ಪದಾರ್ಥಗಳು, ಸಂಸ್ಕರಿಸಿದ ವಿವಿಧ ಧಾನ್ಯದ ಹಿಟ್ಟುಗಳು, ಉಪ್ಪಿನಕಾಯಿ, ಜಾಮ್, ಜೆಲ್ಲಿಗಳು, ಮಸಾಲ ಪದಾರ್ಥಗಳು ಇನ್ನಿತರೇ ಹಲವಾರು ವೈವಿಧ್ಯತೆಗಳಿಂದ ಕೂಡಿದ ಆಹಾರ ಪದಾರ್ಥಗಳು, ಹರ್ಬಲ್ ಸೌಂಧರ್ಯವರ್ಧಕಗಳು ಇತ್ಯಾದಿ ಇವುಗಳನ್ನು ಮಾರಾಟ ಮಾಡಲಿದ್ದಾರೆ.

ಮೇಳದಲ್ಲಿ ಸುಮಾರು 50 ರಿಂದ 60 ಪ್ರದರ್ಶನ ಮಳಿಗೆಗಳನ್ನು ವ್ಯವಸ್ಥೆ ಮಾಡಲಾಗಿದ್ದು, ಈ ಎರಡು ದಿನಗಳಂದು ಬೆಳಿಗ್ಗೆ 9 ರಿಂದ ರಾತ್ರಿ 8 ಗಂಟೆವರೆಗೆ ಪ್ರದರ್ಶನ ಮಳಿಗೆಗಳು ಕಾರ್ಯನಿರ್ವಹಿಸಲಿದೆ.

ಪ್ರದರ್ಶನ ವೀಕ್ಷಿಸಲು ಸಾರ್ವಜನಿಕರಿಗೆ ಉಚಿತ ಪ್ರವೇಶ ಅವಕಾಶವಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಭೇಟಿನೀಡಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 185/305

## ರಾಜ್ಯ ಸರ್ಕಾರಿ ಅಂಧ ನೌಕರರ ಸಂಘದ ಪ್ರತಿನಿಧಿಗಳಿಂದ ವೇತನ ಆಯೋಗದ ಅಧ್ಯಕ್ಷರ ಭೇಟಿ

**ಬೆಂಗಳೂರು, ಅಕ್ಟೋಬರ್ 12 ( ಕರ್ನಾಟಕ ವಾರ್ತೆ) :**

ಕರ್ನಾಟಕ ರಾಜ್ಯ ಸರ್ಕಾರಿ ಅಂಧ ನೌಕರರ ಸಂಘದ ಪ್ರತಿನಿಧಿಗಳು ಇಂದು 6ನೇ ವೇತನ ಆಯೋಗದ ಅಧ್ಯಕ್ಷರಾದ ಎಂ.ಆರ್. ಶ್ರೀನಿವಾಸಮೂರ್ತಿ ಅವರನ್ನು ಭೇಟಿಯಾಗಿ ತಮ್ಮ ಸಮಸ್ಯೆಗಳ ಬಗ್ಗೆ ಚರ್ಚಿಸಿ, ಬೇಡಿಕೆಗಳನ್ನು ಸಲ್ಲಿಸಿದರು.

ವಿಶೇಷವಾಗಿ ಅಂಧ ನೌಕರರು ಹಣಕಾಸಿನ ಬೇಡಿಕೆಗಳಿಗಿಂತ ಸಮರ್ಪಕವಾಗಿ ಕೆಲಸ ನಿರ್ವಹಿಸಲು ಪೂರಕವಾದ ವಾತಾವರಣ ಹಾಗೂ ಅಗತ್ಯ ಉಪಕರಣಗಳನ್ನು ಒದಗಿಸುವಂತೆ ಮನವಿ ಮಾಡಿರುವುದು ವಿಶೇಷವಾಗಿತ್ತು.

ಅಂಧರು ಕೆಲಸ ನಿರ್ವಹಿಸಲು ಬಳಸುವ ಸ್ಕ್ರೀನ್ ರೀಡರ್‌ನಂತಹ ಸಹಾಯಕ ತಂತ್ರಾಂಶಗಳ ಮೂಲಕ ರಾಜ್ಯ ಸರ್ಕಾರದಲ್ಲಿ ಸೇವೆ ಸಲ್ಲಿಸಲು ವ್ಯವಸ್ಥೆಗೊಳಿಸುವಂತೆ ಈ ಸಂದರ್ಭದಲ್ಲಿ ಮನವಿ ಮಾಡಲಾಯಿತು.

2016 ರ ಅಂಗವಿಕಲರ ಹಕ್ಕುಗಳ ಅಧಿನಿಯಮದ ಅನುಸಾರ ಅಂಧ ಮತ್ತು ಅಂಗವಿಕಲ ನೌಕರರನ್ನು ಕೆಲಸ ಮಾಡುವ ಸ್ಥಳಗಳಲ್ಲಿ ಗೌರವಾನ್ವಿತವಾಗಿ ನಡೆಸಿಕೊಳ್ಳುವಂತೆ ಹಾಗೂ ದೃಷ್ಟಿವುಳ್ಳ ನೌಕರರು ಮಾಡಬಹುದಾದಂತಹ ಎಲ್ಲಾ ಕೆಲಸಗಳನ್ನು ಅಂಧ ನೌಕರರು ಹೇಗೆ ಮಾಡಬಹುದು ಎಂಬ ಕೆಲವೊಂದು ಅಂಶಗಳನ್ನು ಪ್ರಾತ್ಯಕ್ಷಿಕೆಗಳ ಮೂಲಕ ಪ್ರದರ್ಶಿಸಿ ಆಯೋಗದ ಗಮನ ಸೆಳೆಯಲಾಯಿತು.

ಅಂಧ ನೌಕರರ ಸಂಘದ ಬೇಡಿಕೆಯ ಕುರಿತು ಈ ಹಿಂದೆ ಸಲ್ಲಿಸಿದ ಮನವಿಗೆ ಸ್ಪಂಧಿಸಿದ ಅಧ್ಯಕ್ಷರು ಇಂದು ಸಂಘದ ಪದಾಧಿಕಾರಿಗಳನ್ನು ತಮ್ಮ ಕಚೇರಿಯಲ್ಲಿ ಭೇಟಿಯಾಗಿ, ಚರ್ಚಿಸಿ ಸಕರಾತ್ಮಕವಾಗಿ ಸ್ಪಂದಿಸಿದರು ಎಂದು ಪದಾಧಿಕಾರಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

ಈ ಸಂದರ್ಭದಲ್ಲಿ 6ನೇ ವೇತನ ಆಯೋಗದ ಸದಸ್ಯರುಗಳು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

(ಛಾಯಾಚಿತ್ರ ಲಗತ್ತಿಸಿದೆ)